## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಾವೇರಿ ಜಿಲ್ಲೆ ಹಾವೇರಿ ತಾಲ್ಲೂಕಿನ ದೇವಗಿರಿ ಗ್ರಾಮದಲ್ಲಿ ಕುಡಿಯುವ ನೀರಿನ ಸಂಗ್ರಹಾಲಯ ಹಾಗೂ ಗೋಕಟ್ಟೆ, ಕಾಂಕ್ರೀಟ್ ತಡೆಗೋಡೆ ನಿರ್ಮಿಸುವ ಸಲುವಾಗಿ ಅನುದಾನ ಬಿಡುಗಡೆ ಬಗ್ಗೆ.

ಓದಲಾಗಿದೆ: ಜಿಲ್ಲಾ ಪಂಚಾಯತ್, ಹಾವೇರಿರವರ ಪತ್ರ ಸಂಖ್ಯೆ:ಹಾಜಿಪಂ/ಅಭಿ-1/ಕೆರೆ/ವಹಿ-10/12-2013 ದಿನಾಂಕ:10.12.2013.

---

**ಪೀಠಿಕೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತಿ ಹಾವೇರಿ ರವರು ಹಾವೇರಿ ತಾಲ್ಲೂಕಿನ ದೇವಗಿರಿ ಗ್ರಾಮದಲ್ಲಿ ಕುಡಿಯುವ ನೀರು ಸಂಗ್ರಹಾಲಯ ಹಾಗೂ ಗೋಕಟ್ಟೆ ಕಾಂಕ್ರೀಟ್ ತಡೆಗೋಡೆ ನಿರ್ಮಿಸಿ ಕುಡಿಯುವ ನೀರು ಸರಬರಾಜು ವ್ಯವಸ್ಥೆ ಕಲ್ಪಿಸಲು **ರೂ.22.00ಲಕ್ಷ** ಅನುದಾನ ಬಿಡುಗಡೆ ಮಾಡಬೇಕೆಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದಾರೆ. ಸದರಿ ಪ್ರಸ್ತಾನೆಯನ್ನು ಪರಿಶೀಲಿಸಿದ್ದು **Sustainability** ಘಟಕದಡಿ ಸಿಂಡಿಕೇಟ್ ಬ್ಯಾಂಕ್‌ನಲ್ಲಿ ಸಂಗ್ರಹವಾದ ಬಡ್ಡಿ ಹಣದಿಂದ **ರೂ.22.00ಲಕ್ಷ**ಗಳನ್ನು ಹಾವೇರಿ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 63 ಗ್ರಾನೀಸ(3) 2013 ಬೆಂಗಳೂರು, ದಿನಾಂಕ:21.12.2013**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಹಾವೇರಿ ತಾಲ್ಲೂಕಿನ ದೇವಗಿರಿ ಗ್ರಾಮದ ಕುಡಿಯುವ ನೀರಿನ ಸಂಗ್ರಹಾಲಯ(**Impounding Reservoir**) ಹಾಗೂ ಗೋಕಟ್ಟೆ ಮಧ್ಯ ಕಾಂಕ್ರೀಟ್ ತಡೆಗೋಡೆ ನಿರ್ಮಿಸಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಸಲುವಾಗಿ **Sustainability** ಘಟಕದಡಿ ಸಂಗ್ರಹವಾದ ಬಡ್ಡಿ ಹಣದಿಂದ **ರೂ.22.00ಲಕ್ಷ(ಇಪ್ಪತ್ತೆರಡು ಲಕ್ಷ ರೂಪಾಯಿಗಳು ಮಾತ್ರ)**ಗಳನ್ನು ಹಾವೇರಿ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು **NRDWP - Sustainability** ಮಾರ್ಗಸೂಚಿಗಳನ್ವಯ ಹಾಗೂ ಈಗಾಗಲೇ ಸರ್ಕಾರವು **SWSM** ವತಿಯಿಂದ ನೀಡಿರುವ ಆದೇಶಗಳ / ಮಾರ್ಗಸೂಚಿಗಳನ್ವಯ ವಿನಿಯೋಗಿಸತಕ್ಕದ್ದು.

3. ಸದರಿ ಅನುದಾನ ವಿನಿಯೋಗದ ವಾಸ್ತವಿಕ, ಆರ್ಥಿಕ ಮತ್ತು ಭೌತಿಕ ವಿವರಗಳನ್ನು **IMIS**ನಲ್ಲಿ ದಾಖಲಿಸಲು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಹಾವೇರಿ ರವರು ಕ್ರಮವಹಿಸತಕ್ಕದ್ದು.

4. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ **IFA**ರವರು **ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ: ಗ್ರಾಅಪ/58/ಎಎಫ್ಎನ್/2012, ದಿನಾಂಕ:01.04.2013**ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
**ಇಮೇಲ್:rk3452000@gmail.com**
**ಫೋನ್:22032806, ಫ್ಯಾಕ್ಸ್:22203175**

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.